# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿಕ್ಷಣ ಇಲಾಖೆಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ವಲಯದಡಿಯಲ್ಲಿ ಬರುವ **ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆಗೆ [ರಾಜ್ಯ ವಲಯ ಯೋಜನೆಗಳು],** ಸಂಬಂಧಿಸಿದಂತೆ 2015-16ನೇ ಸಾಲಿನ ಮುಂದುವರಿಕೆ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:-** 1. ದಿನಾಂಕ: 08-04-2015 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಶಿಕ್ಷಣ ಇಲಾಖೆಯ [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ವಲಯದಡಿ ಬರುವ ಕ್ಷೇತ್ರ ಇಲಾಖೆಗಳಿಗೆ ಸಂಬಂಧಿಸಿದಂತೆ 2015-16ನೇ ಸಾಲಿನ ಮುಂದುವರಿಕೆ ಕಾರ್ಯಕ್ರಮಗಳಿಗೆ ಮಂಜೂರಾತಿ ನೀಡಲು ನಡೆದ ಮಂಜೂರಾತಿ ಸಮಿತಿ ಸಭೆಯ ನಡವಳಿಗಳು.

2. ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರ ಸಂ: ಎಫ್‌ಡಿ 2 ಬಿಪಿಇ 2015, ಬೆಂಗಳೂರು, 2014, ದಿ: 31-03-2015.

*****

(1) ಮೇಲೆ ಓದಲಾದ ದಿನಾಂಕ: 08-04-2015ರಂದು ನಡೆದ ಶಿಕ್ಷಣ ಇಲಾಖೆಯ [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ವಲಯದಡಿ ಬರುವ ಕ್ಷೇತ್ರ ಇಲಾಖೆಗಳ 2015-16ನೇ ಸಾಲಿನ ಮುಂದುವರಿಕೆ ಕಾರ್ಯಕ್ರಮಗಳ ಮಂಜೂರಾತಿಗೆ ಸಂಬಂಧಿಸಿದಂತೆ ಇಲಾಖೆಯು ಸಲ್ಲಿಸಿದ ಪ್ರಸ್ತಾವನೆಯನ್ನು ಸುದೀರ್ಘವಾಗಿ ಪರಿಶೀಲಿಸಿ 2015-16ನೇ ಸಾಲಿನ ಮುಂದುವರಿಕೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುಮೋದನೆ ನೀಡಿದೆ.

(2) ಮೇಲೆ (2)ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಅಧಿಕೃತ ಜ್ಞಾಪನ ಪತ್ರದಲ್ಲಿ 1ನೇ ಏಪ್ರಿಲ್ 2014 ರಿಂದ 31ನೇ ಮಾರ್ಚ್ 2016 ವರೆಗಿನ ಅವಧಿಯ ಧನ ವಿನಿಯೋಗದ ವಿಧೇಯಕವನ್ನು ರಾಜ್ಯ ವಿಧಾನ ಮಂಡಲವು ಅನುಮೋದಿಸಿದ್ದು, ಶಿಕ್ಷಣ ಇಲಾಖೆಯ ಅನುದಾನ/ವಿನಿಯೋಗಗಳನ್ನು ಈ ಅಧಿನಿಯಮವು ಅಧಿಕೃತಗೊಳಿಸುತ್ತದೆ ಎಂದು ತಿಳಿಸಿದೆ.

(3) ಇಲಾಖೆಯು ಸಲ್ಲಿಸಿದ ಪ್ರಸ್ತಾವನೆಯನ್ನು ಸುದೀರ್ಘವಾಗಿ ಪರಿಶೀಲಿಸಿ 2015-16ನೇ ಸಾಲಿನಲ್ಲಿನ ಮುಂದುವರಿಕೆ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 131 ಯೋಯೋಕ 2015, ಬೆಂಗಳೂರು, ದಿನಾಂಕ: 08-05-2015**

(4) 2015-16ನೇ ಸಾಲಿಗೆ ಶಿಕ್ಷಣ ಇಲಾಖೆಯ [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ವಲಯದಡಿ ಬರುವ **ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆಗೆ** (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ, ಹೊಸ ಆಯವ್ಯಯದಲ್ಲಿನ ಯೋಜನಾ